**ದಿನಾಂಕ: 29.06.2021 ರಂದು 11-00 ಕ್ಕೆ ಶ್ರೀ ಹೆಚ್. ನಾಗರಾಜಪ್ಪ, ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-177 (ಜೆ.ಪಿ.ನಗರ) ನಡೆದ ಸಭೆಯ ನಡಾವಳಿಗಳು:**

**: ಚರ್ಚೆಯಾದ ವಿಷಯಗಳು :**

1. ವಾರ್ಡ್-177ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

**: ಸಭೆಗೆ ಹಾಜರಾಗಿದ್ದವರ ವಿವರಗಳು :**

| | |
|---|---|
| **ಅಧ್ಯಕ್ಷರು** | ನೋಡಲ್ ಅಧಿಕಾರಿ |
| **ಸದಸ್ಯ ಕಾರ್ಯದರ್ಶಿ** | ವಾರ್ಡ್ 177ರ ಸಹಾಯಕ ಅಭಿಯಂತರರು |
| **ಸದಸ್ಯರುಗಳು** | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| **ಸದಸ್ಯರುಗಳು** | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| **ಸದಸ್ಯರುಗಳು** | ಜೆ.ಪಿ.ನಗರ ಸಹಾಯಕ ಕಂದಾಯ ಅಧಿಕಾರಿಗಳು |
| **ಸದಸ್ಯರುಗಳು** | ಬೆಸ್ಕಾಂ ಅಧಿಕಾರಿಗಳು |
| **ಸದಸ್ಯರುಗಳು** | ತೋಟಗಾರಿಕೆ ಅಧಿಕಾರಿ (Horti. Inspector) |
| **ಸದಸ್ಯರುಗಳು** | ಠಾಣಾಧಿಕಾರಿಗಳು, ನ್ಯಾಯ ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ |
| **ಸದಸ್ಯರುಗಳು** | ಕಂದಾಯ ಪರಿವೀಕ್ಷಕರು, ವಾರ್ಡ್ 177 |
| **ಸದಸ್ಯರುಗಳು** | ಡಾ॥ ಶೃತಿ .ಎಂ.ಎನ್. |

**:ನಡಾವಳಿಯ ವರದಿ:**

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- 17ನೇ ಮುಖ್ಯರಸ್ತೆ, ಜೆ.ಪಿ.ನಗರ 2ನೇ ಹಂತದಲ್ಲಿ ವಾಹನ ಸಂಚಾರ ದಟ್ಟಣೆಯಿದ್ದು, ಸದರಿ ರಸ್ತೆಯಲ್ಲಿ ಟ್ರಾಫಿಕ್ ಪೊಲೀಸ್‌ನ ಉಸ್ತುವಾರಿ, Road humps, Signal, Sign board ಅಳವಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು.

- ಶ್ರೀ ಸತ್ಯಸೇವಾ ಆಶ್ರಮ ಹತ್ತಿರ ಮರದ ರೆಂಬೆ ಕೊಂಬೆಗಳನ್ನು ಕತ್ತರಿಸುವಂತೆ ಸಂಬಂಧಪಟ್ಟ ಇಲಾಖೆಗೆ ಸೂಚಿಸುವಂತೆ ಚರ್ಚಿಸಲಾಯಿತು.

ಪು.ತಿ.ನೋ

- ಜೆ.ಪಿ.ನಗರದಲ್ಲಿ ಪ್ರತಿನಿತ್ಯ ವಿದ್ಯುತ್ ವ್ಯತ್ಯಯವಾಗುತ್ತಿದ್ದು, ಇದರಿಂದಾಗಿ ಮಕ್ಕಳಿಗೆ Online Class & Work from Home ಕೆಲಸ ನಿರ್ವಹಿಸುತ್ತಿರುವವರಿಗೆ ತೊಂದರೆಯಾಗುತ್ತಿರುವುದಾಗಿ ತಿಳಿಸಲಾಯಿತು.

- Wet Waste Collection ಸಮಯವನ್ನು ನಿಗದಿಪಡಿಸುವಂತೆ ಹಾಗೂ ಧ್ವನಿವರ್ಧಕದ ಮೂಲಕವಾಗಲೀ ಅಥವಾ Whistle ಮೂಲಕ ನಿರ್ವಹಿಸುವಂತೆ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು.

- ಕೋವಿಡ್ ವ್ಯಾಕ್ಸಿನ್‌ಅನ್ನು ಹೆಚ್ಚಿನದಾಗಿ ವ್ಯವಸ್ಥೆಯನ್ನು ಕಲ್ಪಿಸುವಂತೆ ಚರ್ಚಿಸಲಾಯಿತು.

- ಜೆ.ಪಿ.ನಗರದ ಪ್ರದೇಶದಲ್ಲಿ ಪೊಲೀಸ್ ಬಿಟ್ ಅನ್ನು ಹೆಚ್ಚಿಗೆ ಮಾಡಲು ಪೊಲೀಸ್ ಅಧಿಕಾರಿಗಳಿಗೆ ತಿಳಿಸಲಾಯಿತು.

- ಬ್ಲಾಕ್ ಸ್ಪಾಟ್‌ನಲ್ಲಿ ಮಾರ್ಷಲ್ ರನ್ನು ನೇಮಿಸುವಂತೆ ಚರ್ಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಘಂಟೆಗೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಸಕಾಲದಲ್ಲಿ ಹಾಜರಾಗುವಂತೆ ಹಾಗೂ ಈ ಸಭೆಯಲ್ಲಿ ತಿಳಿಸಿರುವ ಸಮಸ್ಯೆಗಳನ್ನು ಬಗೆಹರಿಸಲು ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

  - ಸದಸ್ಯ ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(signature) — Nagaraj - Y. (signature)

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧ್ಯಕ್ಷರು**
**ವಾರ್ಡ್ ಸಮಿತಿ, ವಾರ್ಡ್ ನಂ. 177**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**